**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 1227/2017**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - | ತಗಡೇಗೌಡ | **ಚಾ.ಸಾ.-8** |
| **ತಂದೆಯ ಹೆಸರು** | - | ಹೊಸಲಿಂಗೇಗೌಡ | **ಫ್ರಾ.ಸಾ.-5** |
| **ವಯಸ್ಸು** | - | 35 ವರ್ಷ | |
| **ಉದ್ಯೋಗ** | - | ವ್ಯವಸಾಯ | |
| **ವಾಸ ಸ್ಥಳ** | - | ಕೂಳಗೆರೆ | |

ದಿನಾಂಕಃ 19.08.2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ಅಮಾನತ್ತು ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿ.ಪಿ. 1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 1 ಬಿ ಎಂದು ಗುರುತಿಸಲಾಯಿತು. ಸದರೀ ದಾಖಲೆಗೆ ಸುಮಾರು 7-8 ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿ.ಪಿ. 1 ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿ.ಪಿ. 1 ದಾಖಲೆಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಮಹಜರ್ ಕ್ರಮ ಜರುಗಿಸಿಲ್ಲ. ಪೋಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

**<u>ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ</u>**

ದಿನಾಂಕಃ 11.04.2015 ರಂದು ಮದ್ದೂರು ಪೋಲೀಸ್ ಠಾಣೆಯ ಆವರಣದಲ್ಲಿ ಸಂಜೆ 04.00 ರಿಂದ 05.00 ಗಂಟೆಯವರೆಗೆ ನಿಮ್ಮ ಹಾಗೂ ಚಾ,ಸಾ. 7 ರವರ ಸಮಕ್ಷವ ನಿ.ಪಿ. 1 ರಂತೆ ಮಹಜರ್ ಕ್ರಮ ಜರುಗಿಸಿ, ಒಂದು ಕಾಲೇಜ್ ಬ್ಯಾಗ್ 1 ಸಾವಿರ ಮುಖ ಬೆಲೆಯ ಒಂದು ಕರೆನ್ಸಿ ನೋಟ್, 500 ರೂ. ಮುಖ ಬೆಲೆಯ ಒಂದು ಕರೆನ್ಸಿ ನೋಟ್, 100 ರೂ. ಮುಖ ಬೆಲೆಯ ಒಂದುಕರೆನ್ಸಿ ನೋಟ್ ಹಾಗೂ ಆರೋಪಿತರು ಕೃತ್ಯಕ್ಕೆ ಉಪಯೋಗಿಸಿದ ಕೆಎ-10 ಎಸ್ 4286 ನಂಬರಿನ ಮೋಟಾರು ಸೈಕಲ್‌ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿ.ಪಿ. 1 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಹಾಗೂ ದಿನಾಂಕಃ11.04.2017 ರಂದು, ನೀವು ಪೋಲೀಸರಿಗೆ ಹೇಳಿಕೆಯನ್ನು ನೀಡಿದ್ದೀರಿ ಎಂದರೆ ಸರಿಯಲ್ಲ. ಸಾಕ್ಷಿ ಒಪ್ಪದ ಹೇಳಿಕೆಯನ್ನು ನಿ.ಪಿ. 3 ಎಂದು ಗುರುತಿಸಲಾಯಿತು. ನಿಮಗೆ ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.</u>**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.